# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 761 |
| ಸದಸ್ಯರ ಹೆಸರು | : ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸುವ ದಿನಾಂಕ | : 23.07.2024 |
| ಉತ್ತರಿಸುವ ಸಚಿವರು | : ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು. |

| ಕ್ರ. ಸಂ. | ಪ್ರಶ್ನೆಗಳು | ಉತ್ತರ |
|---|---|---|
| ಅ) | ಬೆಂಗಳೂರು ನಗರದಲ್ಲಿರುವ ಪೀಣ್ಯ ಕೈಗಾರಿಕಾ ಪ್ರದೇಶ ಏಷ್ಯಾ ಖಂಡದಲ್ಲಿ ದೊಡ್ಡದೆನ್ನುವ ಹೆಗ್ಗಳಿಕೆ ಇರುವುದು ನಿಜವಲ್ಲವೆ; (ಈ ಬಗ್ಗೆ ವಿವರ ನೀಡುವುದು) | ಹೌದು.<br><br>ಬೆಂಗಳೂರು ನಗರದಲ್ಲಿರುವ ಪೀಣ್ಯ ಕೈಗಾರಿಕಾ ಪ್ರದೇಶ ಏಷ್ಯಾ ಖಂಡದಲ್ಲಿ ಇರುವ ದೊಡ್ಡ ಕೈಗಾರಿಕಾ ಪ್ರದೇಶಗಳಲ್ಲಿ ಒಂದಾಗಿದೆ. |
| ಆ) | ಪೀಣ್ಯ ಕೈಗಾರಿಕೆ ಪ್ರದೇಶದಲ್ಲಿ ಅತಿ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ವರ್ಗದ ಕೈಗಾರಿಕೆಗಳು ಮತ್ತು ವಸಾಹತುಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಮತ್ತು ಈ ವರ್ಗದ ಕೈಗಾರಿಕೆಗಳ ಅಭಿವೃದ್ಧಿಗೆ ಅಗತ್ಯವಿರುವ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವುದು ಸರ್ಕಾರದ ಕರ್ತವ್ಯವಲ್ಲವೇ; | ಬಂದಿದೆ.<br><br>ಪೀಣ್ಯ ಪ್ರದೇಶದಲ್ಲಿ ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಮೂಲಕ ಕೈಗಾರಿಕಾ ವಸಾಹತುಗಳನ್ನು ಅಭಿವೃದ್ಧಿಪಡಿಸಿ ಅವುಗಳನ್ನು ಅತಿ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ವರ್ಗದ ಕೈಗಾರಿಕೆಗಳಿಗೆ ಹಂಚಿಕೆ ಮಾಡಲಾಗಿದೆ. ಈ ವಸಾಹತುಗಳನ್ನು ನಿರ್ಮಿಸಲು ಅಗತ್ಯವಿರುವ ರಸ್ತೆ, ಚರಂಡಿ, ವಿದ್ಯುತ್ ದೀಪ ವ್ಯವಸ್ಥೆ ಇತ್ಯಾದಿ ಮೂಲಸೌಕರ್ಯಗಳನ್ನು ಅಭಿವೃದ್ಧಿಪಡಿಸಿ ಹಂಚಿಕೆ ಮಾಡಲಾಗಿದೆ. ಈ ಕೈಗಾರಿಕಾ ವಸಾಹತುವನ್ನು ಈಗಾಗಲೇ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಹಸ್ತಾಂತರಿಸಲಾಗಿದೆ. ಆದಾಗ್ಯೂ, ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆ ಅಭಿವೃದ್ಧಿ ನಿಗಮದ ಮೂಲಕ ಪುನಃ ಹಾಳಾದ ಮೂಲ ಸೌಕರ್ಯವನ್ನು ಅಭಿವೃದ್ಧಿಪಡಿಸಿದೆ. |
| ಇ) | ಹಾಗಿದ್ದಲ್ಲಿ, ಮೂಲಭೂತ ಸೌಕರ್ಯಗಳಿಲ್ಲದೆ ಬಳಲುತ್ತಿರುವ ಪೀಣ್ಯ ಕೈಗಾರಿಕಾ ಪ್ರದೇಶವನ್ನು ಉನ್ನತೀಕರಿಸಲು ಸರ್ಕಾರ ಕೈಗೊಂಡಿರುವ ಯೋಜನೆಗಳು ಯಾವುವು; (ಪೂರ್ಣ ಮಾಹಿತಿ ನೀಡುವುದು) | ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮವು ಪೀಣ್ಯ ಕೈಗಾರಿಕಾ ವಸಾಹತುವಿನ ಮೂಲಸೌಕರ್ಯವನ್ನು (ರಸ್ತೆ, ಚರಂಡಿ, ವಿದ್ಯುತ್ ದೀಪ ಇತ್ಯಾದಿ) Critical Infrastructure Development ಯೋಜನೆಯಡಿಯಲ್ಲಿ ಕೆಳಕಂಡಂತೆ ಅಭಿವೃದ್ಧಿಪಡಿಸಿದೆ. |

| ಕ್ರ. ಸಂ. | ಅವಧಿ | ರೂ. ಕೋಟಿಗಳಲ್ಲಿ |
|---|---|---|
| 1 | 2018-19 | 10.00 |
| 2 | 2019-20 | 10.00 |
| 3 | 2020-21 | 10.00 |
| 4 | 2022-23 | 5.00 |
| 5 | 2023-24 | 35.01 |

ಈ) ರಾಜ್ಯದಲ್ಲಿ ತಲೆದೂರಿದ ಕೋವಿಡ್-19ರ ಸಾಂಕ್ರಾಮಿಕ ರೋಗದ ಸಂದರ್ಭದಲ್ಲಿ ಹಲವಾರು ಸಣ್ಣ ಕೈಗಾರಿಕೆಗಳು ಮುಚ್ಚಿ ಹೋಗಿದ್ದು ಈ ಸಣ್ಣ ಕೈಗಾರಿಕೆಗಳನ್ನು ಪುನಃಶ್ಚೇತನಗೊಳಿಸಲು ಸರ್ಕಾರ ಕೈಗೊಂಡಿರುವ ಯೋಜನೆಗಳು ಯಾವುವು? (ಪೂರ್ಣ ವಿವರ ನೀಡುವುದು)

ಕರ್ನಾಟಕ ಸರ್ಕಾರವು ಕೊರೋನಾದಿಂದ ತೊಂದರೆಯಾಗಿರುವ ಅನೇಕ ಸಣ್ಣ ಉದ್ಯಮಗಳಿಗೆ ಪ್ರೋತ್ಸಾಹ ನೀಡಲು ಈ ಕೆಳಗಿನ ಯೋಜನೆಗಳನ್ನು ಜಾರಿಗೊಳಿಸಲಾಗಿದೆ:

1. ಇಂಧನ ಇಲಾಖೆಯು ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳ ಏಪ್ರಿಲ್ ಮತ್ತು ಮೇ 2020 ತಿಂಗಳ ಬೇಡಿಕೆ ಶುಲ್ಕ ಮತ್ತು ಸ್ಥಿರ ಶುಲ್ಕವನ್ನು ಮನ್ನಾ ಮಾಡಿರುತ್ತದೆ.
2. ಇಂಧನ ಇಲಾಖೆಯು ವಿದ್ಯುತ್ ಬಿಲ್‌ನ್ನು ಪ್ರಾಮಾಣಿಕವಾಗಿ ನಿಗದಿತ ಅವಧಿಯೊಳಗೆ ಪಾವತಿಸುವ ಕೈಗಾರಿಕೆಗಳಿಗೆ ರಿಯಾಯಿತಿಯನ್ನು ನೀಡಿರುತ್ತದೆ. ಹೆಚ್.ಟಿ ಗರಿಷ್ಟ ಮಿತಿ ರೂ.1 ಲಕ್ಷ, ಎಲ್‌ಟಿ ಗರಿಷ್ಟ ಮಿತಿ ರೂ.10,000/-

| | |
|---|---|
| 1 ರಿಂದ 5 ದಿನದೊಳಗೆ ಪಾವತಿಸಿದಲ್ಲಿ | ಶೇ 1% ರಿಯಾಯಿತಿ |
| 6 ರಿಂದ 15 ದಿನದೊಳಗೆ ಪಾವತಿಸಿದಲ್ಲಿ | ಶೇ 0.5% ರಿಯಾಯಿತಿ |
| 15 ರಿಂದ 30 ದಿನದೊಳಗೆ ಪಾವತಿಸಿದಲ್ಲಿ | ಯಾವುದೇ ರಿಯಾಯಿತಿ ಇರುವುದಿಲ್ಲ. |

3. ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯು ಉದ್ಯಮಶೀಲರು ತಮಗೆ ಹಂಚಿಕೆಯಾದ ನಿವೇಶನಗಳ ಕಂತು ಮಾರ್ಚ್, ಏಪ್ರಿಲ್ ಮೇ 2020 ತಿಂಗಳಲ್ಲಿ ಪಾವತಿಸಿದ್ದಲ್ಲಿ, ಆ ಪಾವತಿಯನ್ನು ಕ್ರಮವಾಗಿ 3 ತಿಂಗಳು ಮುಂದೂಡಲಾಗಿದೆ ಮತ್ತು ಈ ಮೊತ್ತಕ್ಕೆ ಯಾವುದೇ ಬಡ್ಡಿಯನ್ನು ವಿಧಿಸುವುದಿಲ್ಲ.
4. ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮವು ಉದ್ಯಮಶೀಲರು ತಮಗೆ ಹಂಚಿಕೆಯಾದ ನಿವೇಶನಗಳ ಕಂತು, ಮಳಿಗೆಗಳ ಬಾಡಿಗೆ ಮತ್ತು ನೀರಿನ ಶುಲ್ಕಗಳ ಏಪ್ರಿಲ್, ಮೇ ಮತ್ತು ಜೂನ್ 2020 ತಿಂಗಳುಗಳ ಕಂತನ್ನು ಈ ಕೆಳಗಿನಂತೆ ಪಾವತಿಸಲು ಅವಕಾಶ ಕಲ್ಪಿಸಲಾಗಿತ್ತು. ಇದಕ್ಕೆ ಯಾವುದೇ ಬಡ್ಡಿಯನ್ನು ವಿಧಿಸಲಾಗುವುದಿಲ್ಲ.

| | |
|---|---|
| ಏಪ್ರಿಲ್ 2020 ತಿಂಗಳ ಕಂತು | ಜೂನ್ 2020 ತಿಂಗಳ ಕಂತಿನ ಜೊತೆ ಪಾವತಿಸತಕ್ಕದ್ದು |
| ಮೇ 2020 ತಿಂಗಳ ಕಂತು | ಜುಲೈ 2020 ತಿಂಗಳ ಕಂತಿನ ಜೊತೆ ಪಾವತಿಸತಕ್ಕದ್ದು |
| ಜೂನ್ 2020 ತಿಂಗಳ ಕಂತು | ಆಗಸ್ಟ 2020 ತಿಂಗಳ ಕಂತಿನ ಜೊತೆ ಪಾವತಿಸತಕ್ಕದ್ದು |

ಕೊರೋನಾ 2ನೇ ಅಲೆಯ ನಂತರ ಇಂಧನ ಇಲಾಖೆಯು ದಿನಾಂಕ: 21.06.2021ರ ಆದೇಶದಂತೆ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳು ಪಾವತಿಸಬೇಕಾದ ಮೇ ಮತ್ತು ಜೂನ್ 2021 ತಿಂಗಳ ಬೇಡಿಕೆ / ನಿಗದಿತ ಶುಲ್ಕವನ್ನು ಮನ್ನಾ ಮಾಡಿರುತ್ತದೆ.

ಕೇಂದ್ರ ಸರ್ಕಾರ ಘೋಷಿಸಿರುವ "ಆತ್ಮ ನಿರ್ಭರ ಭಾರತ ಅಭಿಯಾನ"ದ ಅಡಿಯಲ್ಲಿ ಅತೀ ಸಣ್ಣ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳನ್ನು ಪುನಃಶ್ಚೇತನಗೊಳಿಸಲು ಮತ್ತು ಉದ್ಯಮಗಳಿಗೆ ಆರ್ಥಿಕ ನೆರವು ನೀಡುವ ಯೋಜನೆಯಲ್ಲಿ ಈ ಕೆಳಗಿನ ನೆರವು ದೊರೆತಿದೆ:

| | |
|---|---|
| | ಭಾರತ ಸರ್ಕಾರವು "ಇ.ಸಿ.ಎಲ್.ಜಿ" - ಎಮರ್ಜೆನ್ಸಿ ಕ್ರೆಡಿಟ್ ಲೈನ್ ಗ್ಯಾರಂಟಿ ಯೋಜನೆಯನ್ನು ಜಾರಿಗೆ ತಂದಿದ್ದು, ಇದರನ್ವಯ ಫೆಬ್ರವರಿ 2020ರ ಅಂತ್ಯಕ್ಕೆ ಬ್ಯಾಂಕ್‌ಗಳಲ್ಲಿ ಬಾಕಿ ಇರುವ ಎಂ.ಎಸ್.ಎಂ.ಇ ಘಟಕಗಳ ಸಾಲದ ಮೊತ್ತಕ್ಕೆ ಶೇ.20 ರಷ್ಟು ಹೆಚ್ಚುವರಿ ಸಾಲವನ್ನು ಯಾವುದೇ ಹೆಚ್ಚುವರಿ ಖಾತರಿ ಇಲ್ಲದೇ ನೀಡುವ ಯೋಜನೆಯನ್ನು ಜಾರಿಗೆ ತಂದಿರುತ್ತದೆ. |

ಸಿಐ 169 ಸಿಎಸ್‌ಸಿ 2024

(ಶರಣಬಸಪ್ಪ ದರ್ಶನಾಪೂರ)
ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು.